ವಾರ್ತಾ ಭಾರತಿ

# ಲಂಡನ್‌ನ ಬಸವೇಶ್ವರ ಪುತ್ಥಳಿಗೆ ಸ್ಪೀಕರ್, ಸಭಾಪತಿ ಮಾಲಾರ್ಪಣೆ



ಬೆಂಗಳೂರು, ಅ. 16: ಲಂಡನ್‌ನಲ್ಲಿರುವ ಬಸವೇಶ್ವರ ಪುತ್ಥಳಿಗೆ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಸೋಮವಾರ ಕರ್ನಾಟಕ ಕಾಮನ್ ವೆಲ್ತ್ ಸಂಸದೀಯ ಸಂಘದ ಕರ್ನಾಟಕ ಶಾಖೆಯ ವೀಕ್ಷಕರಾಗಿ ಘಾನಾ ದೇಶದಲ್ಲಿ ನಡೆದ 66ನೇ ಕಾಮನ್ ವೆಲ್ತ್ ಸಂಸದೀಯ ಸಮ್ಮೇಳನ ಹಾಗೂ ಇತರ ದೇಶಗಳಲ್ಲಿ ಅಧ್ಯಯನ ಪ್ರವಾಸ ಕೈಗೊಂಡಿರುವ ಸ್ಪೀಕರ್ ಯು.ಟಿ. ಖಾದರ್ ಹಾಗೂ ಸಭಾಪತಿ ಬಸವರಾಜ್ ಹೊರಟ್ಟಿ ಯುನೈಟೆಡ್ ಕಿಂಗ್‌ಡಮ್‌ನ ಲಂಡನ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಲ್ಲಿನ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವವನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಲಂಡನ್ ನಗರ ಮಾಜಿ ಮೇಯರ್ ಹಾಗೂ ಅಲ್ಲಿನ ಬಸವ ಸಮಿತಿ ಅಧ್ಯಕ್ಷ ಡಾ. ನೀರಜ್ ಪಾಟೀಲ್ ಹಾಗೂ ಇತರರು ಉಪಸ್ಥಿತರಿದ್ದರು.

# ಲಂಡನ್‌ನ ಬಸವೇಶ್ವರ ಪುತ್ಥಳಿಗೆ ಖಾದರ್ ಮಾಲಾರ್ಪಣೆ



❑ ಸ್ನೇಹಜೀವಿ ನ್ಯೂಸ್

ಬೆಂಗಳೂರು: ಲಂಡನ್‌ನ ಬಸವೇಶ್ವರ ಪುತ್ಥಳಿಗೆ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿ ಹೊರಟ್ಟಿ ಮಾಲಾರ್ಪಣೆ ಮಾಡಿದರು.

ಕರ್ನಾಟಕ ಕಾಮನ್ ವೆಲ್ತ್ ಸಂಸದೀಯ ಸಂಘದ ಕರ್ನಾಟಕ ಶಾಖೆಯ ವೀಕ್ಷಕರಾಗಿ ಘಾನಾ ದೇಶದಲ್ಲಿ ನಡೆದ 66ನೇ ಕಾಮನ್ ವೆಲ್ ಸಂಸದೀಯ ಸಮ್ಮೇಳನ ಹಾಗೂ ಇತರೆ ದೇಶಗಳಲ್ಲಿ ಅಧ್ಯಯನ ಪ್ರವಾಸ ಕೈಗೊಂಡಿರುವ ಅವರು ಸೋಮವಾರ ಯುನೈಟೆಡ್ ಕಿಂಗ್ ಡಮ್ನ ಲಂಡನ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವವನ್ನು ಸಲ್ಲಿಸಿದರು. ಲಂಡನ್ ನಗರ ಮಾಜಿ ಮೇಯರ್ ಹಾಗೂ ಅಲ್ಲಿನ ಬಸವ ಸಮಿತಿ ಅಧ್ಯಕ್ಷ ಡಾ. ನೀರಜ್ ಪಾಟೀಲ್ ಹಾಗೂ ಇತರರು ಉಪಸ್ಥಿತರಿದ್ದರು.



ಲಂಡನ್‌ನ ಶ್ರೀ ಬಸವೇಶ್ವರ ಪುತ್ಥಳಿಗೆ ವಿಧಾನ ಪರಿಷತ್ತು ಸಭಾಪತಿ ಬಸವರಾಜ್ ಹೊರಟ್ಟಿ, ವಿಧಾನ ಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಮಾಲಾರ್ಪಣೆ ಮಾಡಿದರು.

# ಬಸವೇಶ್ವರ ಪುತ್ಥಳಿಗೆ ಸ್ಪೀಕರ್, ಸಭಾಪತಿ ಗೌರವ

**ಬೆಂಗಳೂರು:** ಲಂಡನ್‌ನ ಶ್ರೀ ಬಸವೇಶ್ವರ ಪುತ್ಥಳಿಗೆ ವಿಧಾನ ಪರಿಷತ್ತು ಸಭಾಪತಿ ಬಸವರಾಜ್ ಹೊರಟ್ಟಿ, ವಿಧಾನ ಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಕರ್ನಾಟಕ ಕಾಮನ್ ವೆಲ್ತ್ ಸಂಸದೀಯ ಸಂಘದ ಕರ್ನಾಟಕ ಶಾಖೆಯ ವೀಕ್ಷಕರಾಗಿ ಘಾನಾ ದೇಶದಲ್ಲಿ ನಡೆದ 66ನೇ ಕಾಮನ್ ವೆಲ್ತ್ ಸಂಸದೀಯ ಸಮ್ಮೇಳನ ಹಾಗೂ ಇತರೆ ದೇಶಗಳಲ್ಲಿ ಅಧ್ಯಯನ ಪ್ರವಾಸ ಕೈಗೊಂಡಿರುವ

ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ್ ಶಿವಲಿಂಗಪ್ಪ ಹೊರಟ್ಟಿ ಹಾಗೂ ವಿಧಾನ ಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಫರೀದ್ ಅವರುಗಳು ಅಕ್ಟೋಬರ್ 16 ರಂದು ಯುನೈಟೆಡ್ ಕಿಂಗ್ ಡಮ್‌ನ ಲಂಡನ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಲ್ಲಿನ ಶ್ರೀ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವವನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಲಂಡನ್ ನಗರ ಮಾಜಿ ಮೇಯರ್ ಹಾಗೂ ಅಲ್ಲಿನ ಬಸವ ಸಮಿತಿ ಅಧ್ಯಕ್ಷರಾದ ಡಾ. ನೀರಜ್ ಪಾಟೀಲ್ ಹಾಗೂ ಇತರರು ಹಾಜರಿದ್ದರು.